Akashvani: Bangalore
National Bulletin In Kannada
18.10.2025 : 7.35AM
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

18.10.2025 : 7.35AM
*******

**ಮುಖ್ಯಾಂಶಗಳು :**

1. ಲಖನೌದಲ್ಲಿಂದು ಬ್ರಹ್ಮೋಸ್ ಕ್ಷಿಪಣಿಗಳಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಸಿರು ನಿಶಾನೆ
2. ಎಲೆಕ್ಟ್ರಾನಿಕ್ಸ್‌ನಿಂದ ಔಷಧಗಳವರೆಗೆ ಭಾರತದಲ್ಲಿ ಹೂಡಿಕೆಯ ಅಲೆ - ಪ್ರಧಾನಿ ನರೇಂದ್ರ ಮೋದಿ
3. ವಜ್ರ ವ್ಯಾಪಾರಿ ಮೆಹುಲ್ ಚೋಕ್ಸಿ ಭಾರತಕ್ಕೆ ಹಸ್ತಾಂತರಿಸಲು ಬೆಲ್ಜಿಯಂ ನ್ಯಾಯಾಲಯ ಅನುಮತಿ
4. ನೂತನ ಗ್ರಾಹಕರಿಗೆ ಬಿಎಸ್‌ಎನ್‌ಎಲ್ ಹಬ್ಬದ ಕೊಡುಗೆ; ಒಂದು ರೂಪಾಯಿಯ ೪-ಜಿ ಯೋಜನೆ ಪರಿಚಯ
5. ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಟೂರ್ನಿ; ಭಾರತದ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ - ಚಿರಾಗ್ ಶೆಟ್ಟಿ ಸೆಮಿಫೈನಲ್ ಪ್ರವೇಶ

**********

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಇಂದು ಲಕ್ನೋದ ಬ್ರಹ್ಮೋಸ್ ಏರೋಸ್ಪೇಸ್ ಘಟಕದಲ್ಲಿ ತಯಾರಾದ ಮೊದಲ ತಂಡದ ಬ್ರಹ್ಮೋಸ್ ಕ್ಷಿಪಣಿಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ಲಕ್ನೋ ಬ್ರಹ್ಮೋಸ್ ಘಟಕವು ಉತ್ತರ ಪ್ರದೇಶ ರಕ್ಷಣಾ ಕಾರಿಡಾರ್ ನಲ್ಲಿ ಮೊದಲ ಸೌಲಭ್ಯವಾಗಿದ್ದು, ಅಲ್ಲಿ ಕ್ಷಿಪಣಿ ವ್ಯವಸ್ಥೆಯ ತಯಾರಿಕೆಯಿಂದ ಅಂತಿಮ ಪರೀಕ್ಷೆಯವರೆಗಿನ ಸಂಪೂರ್ಣ ಪ್ರಕ್ರಿಯೆಯನ್ನು ಸ್ಥಳೀಯವಾಗಿ ನಡೆಸಲಾಗುತ್ತದೆ. ಸಮಾರಂಭದಲ್ಲಿ, ರಕ್ಷಣಾ ಸಚಿವರು ಮತ್ತು ಮುಖ್ಯಮಂತ್ರಿಗಳು ಬೂಸ್ಟರ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಹಾಗೂ ಬೂಸ್ಟರ್ ಡಾಕಿಂಗ್ ಪ್ರಕ್ರಿಯೆಯ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ.

**********

ಎಲೆಕ್ಟ್ರಾನಿಕ್ಸ್‌ನಿಂದ ಔಷಧಗಳವರೆಗೆ ಅಥವಾ ಆಟೋಮೊಬೈಲ್‌ಗಳಿಂದ ಮೊಬೈಲ್ ಉತ್ಪಾದನೆವರೆಗೆ ಭಾರತದಲ್ಲಿ ಹೂಡಿಕೆಯ ಅಲೆ ಹರಿಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ಖಾಸಗಿ ಮಾಧ್ಯಮ ಸಂಸ್ಥೆ ಆಯೋಜಿಸಿದ್ದ ವಿಶ್ವ ಶೃಂಗಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಹೂಡಿಕೆಗಳು ಭಾರತವು ಜಾಗತಿಕ ಪೂರೈಕೆಯ ಸರಪಳಿಯ ಕೇಂದ್ರವಾಗಲು ಸಹಾಯ ಮಾಡುತ್ತಿವೆ ಎಂದು ತಿಳಿಸಿದ್ದಾರೆ. ಯುರೋಪಿಯನ್ ರಾಷ್ಟ್ರಗಳು ಭಾರತದಲ್ಲಿ ನೂರು ಶತಕೋಟಿ ಡಾಲರ್‌ಗಳ ಹೂಡಿಕೆಗೆ ಬದ್ಧವಾಗಿದ್ದು, ದೊಡ್ಡ ಪ್ರಮಾಣದ ಉದ್ಯೋಗ ಸೃಷ್ಟಿಗೆ ಕಾರಣವಾಗಲಿವೆ ಎಂದು ಹೇಳಿದ್ದಾರೆ. ಇಡೀ ಜಗತ್ತು ಭಾರತವನ್ನು ವಿಶ್ವಾಸಾರ್ಹ ಜವಾಬ್ದಾರಿಯುತ ಮತ್ತು ಉತ್ತಮ ಪಾಲುದಾರನನ್ನಾಗಿ ನೋಡುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**********

ಭಾರತದ ವಜ್ರ ವ್ಯಾಪಾರಿ ಮೆಹುಲ್ ಚೋಕ್ಸಿಯನ್ನು ಹಸ್ತಾಂತರಿಸಲು ಬೆಲ್ಜಿಯಂ ನ್ಯಾಯಾಲಯ ಅನುಮತಿ ನೀಡಿದೆ. ೧೩ ಸಾವಿರ ಕೋಟಿ ರೂಪಾಯಿಗಳ ಪಂಜಾಬ್ ನ್ಯಾಷನಲ್ ಬ್ಯಾಂಕ್ ವಂಚನೆ ಪ್ರಕರಣದಲ್ಲಿ ಮೆಹುಲ್ ಚೋಕ್ಸಿ ಭಾರತದಿಂದ ಪರಾರಿಯಾಗಿದ್ದರು. ಭಾರತದ ಕೋರಿಕೆಯ ಮೇರೆಗೆ ಬೆಲ್ಜಿಯಂ ಪೊಲೀಸರು ಚೋಕ್ಸಿಯನ್ನು ಬಂಧಿಸಿದ್ದು ಮಾನ್ಯವಾಗಿದೆ ಎಂದು ಅಂಟ್ವೆರ್ಪ್ ನ್ಯಾಯಾಲಯ ತೀರ್ಪು ನೀಡಿದೆ. ಪರಾರಿಯಾಗಿರುವ ವಜ್ರ ವ್ಯಾಪಾರಿಯನ್ನು ಭಾರತಕ್ಕೆ ಮರಳಿ ತರುವಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ. ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಲು ಚೋಕ್ಸಿಗೆ ೧೫ ದಿನಗಳ ಕಾಲಾವಕಾಶವಿದೆ. ಮೇಲ್ಮನವಿ ವಿಫಲವಾದರೆ ಇಲ್ಲವೇ ಸಲ್ಲಿಸದಿದ್ದರೆ ಚೋಕ್ಸಿಯನ್ನು ಭಾರತಕ್ಕೆ ಕರೆತರಲಾಗುವುದು.

**********

ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ - ಬಿಎಸ್ ಎನ್ ಎಲ್ ದೇಶಾದ್ಯಂತ ನೂತನ ಗ್ರಾಹಕರಿಗೆ ಹಬ್ಬದ ಕೊಡುಗೆಯಾಗಿ ೧ ರೂಪಾಯಿಯ ದೀಪಾವಳಿ ೪-ಜಿ ಯೋಜನೆಯನ್ನು ಪರಿಚಯಿಸಿದೆ. ಈ ತಿಂಗಳ ೧೫ ರಿಂದ ಮುಂದಿನ ತಿಂಗಳು ೧೫ ರವರೆಗೆ ಅನ್ವಯವಾಗುವ ಈ ಯೋಜನೆಯಲ್ಲಿ ಅನಿಯಮಿತ ಕರೆಗಳು, ದಿನಕ್ಕೆ ೨ ಜಿಬಿ ಡೇಟಾ ಮತ್ತು ದಿನಕ್ಕೆ ೧೦೦ ಎಸ್‌ಎಂಎಸ್ ಸೇರಿದಂತೆ

೩೦ ದಿನಗಳ ಉಚಿತ ಮೊಬೈಲ್ ಸೇವೆಗಳನ್ನು ನೀಡಲಿದೆ. ಈ ಹಬ್ಬದ ಯೋಜನೆಯನ್ನು ಪ್ರಕಟಿಸಿದ ಬಿಎಸ್ ಎನ್ ಎಲ್ ವ್ಯವಸ್ಥಾಪಕ ನಿರ್ದೇಶಕ ಎ. ರಾಬರ್ಟ್ ಜೆ. ರವಿ ಮಾತನಾಡಿ, ೧ ರೂಪಾಯಿಯಲ್ಲಿ ದೀಪಾವಳಿ ಹಬ್ಬದ ಯೋಜನೆಯು ಅತ್ಯಾಧುನಿಕ, ಮೇಕ್-ಇನ್-ಇಂಡಿಯಾ ೪ಜಿ ನೆಟ್‌ವರ್ಕ್ ಅನ್ನು ಅನುಭವಿಸಲು ಜನರಿಗೆ ಅನುವು ಮಾಡಿಕೊಡಲಿದೆ. ಈ ಯೋಜನೆಯನ್ನು ಹೊರತುಪಡಿಸಿ, ವಿವಿಧ ಗ್ರಾಹಕರ ವಿಭಾಗಗಳಿಗೆ ಇನ್ನೂ ಐದು ಯೋಜನೆಗಳನ್ನು ಬಿಎಸ್‌ಎನ್‌ಎಲ್ ಪರಿಚಯಿಸಿದೆ.

**********

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ನಾಮಪತ್ರಗಳ ಪರಿಶೀಲನೆ ಇಂದು ನಡೆಯಲಿದೆ. ಮೊದಲ ಹಂತದಲ್ಲಿ, ನವೆಂಬರ್ ೬ ರಂದು ೧೮ ಜಿಲ್ಲೆಗಳ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಅಭ್ಯರ್ಥಿಗಳು ಅಕ್ಟೋಬರ್ ೨೦ ರವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಮೊದಲ ಹಂತದ ನಾಮಪತ್ರಗಳ ಕೊನೆಯ ದಿನದಂದು, ನಿತೀಶ್ ಕುಮಾರ್ ಸರ್ಕಾರದ ನಾಲ್ವರು ಸಚಿವರು ಸೇರಿದಂತೆ ಹಲವಾರು ಪ್ರಮುಖ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಮೊದಲ ಹಂತಕ್ಕೆ ಒಟ್ಟು ೧ ಸಾವಿರದ ೬೯೮ ನಾಮಪತ್ರಗಳು ಸಲ್ಲಿಕೆಯಾಗಿವೆ. ಸೋಮವಾರದವರೆಗೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಎರಡನೇ ಹಂತಕ್ಕೆ ಇಲ್ಲಿಯವರೆಗೆ ೨೯೦ ನಾಮಪತ್ರಗಳು ಸಲ್ಲಿಕೆಯಾಗಿವೆ. ನವೆಂಬರ್ ೧೧ ರಂದು ಎರಡನೇ ಹಂತದಲ್ಲಿ ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

**********

ಬಿಹಾರದಲ್ಲಿ ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆಸುವ ಹಿನ್ನೆಲೆಯಲ್ಲಿ ಚುನಾವಣಾ ಅಕ್ರಮಗಳಿಗೆ ಕಡಿವಾಣ ಹಾಕಲು ಚುನಾವಣಾ ಆಯೋಗ ವ್ಯಾಪಕ ಕಣ್ಗಾವಲು ಇಟ್ಟಿದೆ. ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ, ನಗದು, ಮಾದಕದ್ರವ್ಯ, ಮದ್ಯ ಸೇರಿದಂತೆ ಇನ್ನಿತರ ಆಮಿಷ ವಸ್ತುಗಳ ಸಾಗಾಟ ತಡೆಗಟ್ಟುವ ನಿಟ್ಟಿನಲ್ಲಿ ಕಾನೂನು ಜಾರಿ ಪ್ರಾಧಿಕಾರಗಳ ಮುಖ್ಯಸ್ಥರೊಂದಿಗೆ ಮಹತ್ವದ ಸಭೆ ನಡೆಸಿತು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಹಲವಾರು ಇಲಾಖೆಗಳ ಮುಖ್ಯಸ್ಥರು ಭಾಗವಹಿಸಿ ಮತದಾನ ಪ್ರಕ್ರಿಯೆಯನ್ನು ಬಲಿಷ್ಠ ಮತ್ತು ದೋಷರಹಿತವಾಗಿಸಲು ತಮ್ಮ ಸಲಹೆಗಳನ್ನು ನೀಡಿದರು. ಬಿಹಾರದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರು ಸಹ ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿಯೊಂದಿಗೆ ವೀಡಿಯೊ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

**********

ಬೇಲೆಕೇರಿ ಕಬ್ಬಿಣದ ಅದಿರು ರಫ್ತು ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಶೋಧ ಕಾರ್ಯಾಚರಣೆ ನಡೆಸಿ, ೧೨ ಕೋಟಿ ೮೦ ಲಕ್ಷ ರೂಪಾಯಿ ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಕರ್ನಾಟಕದ ಕಾರವಾರ ಜಿಲ್ಲೆಯ ಬೇಲೆಕೇರಿ ಬಂದರಿನ ಮೂಲಕ ಅಕ್ರಮ ಕಬ್ಬಿಣದ ಅದಿರು ರಫ್ತು ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ಹೊಸಪೇಟೆ ಮತ್ತು ಗುರುಗ್ರಾಮದಲ್ಲಿ ಇಡಿ ದಾಳಿ ನಡೆಸಿತ್ತು. ಶೋಧ ಕಾರ್ಯಾಚರಣೆಯ ಸಮಯದಲ್ಲಿ, ಕಬ್ಬಿಣದ ಅದಿರು ಅಕ್ರಮವಾಗಿ ರಫ್ತಿಗೆ ಸಂಬಂಧಿಸಿದ ವಿವಿಧ ದಾಖಲೆಗಳು ಪತ್ತೆಯಾಗಿವೆ. ದಾಳಿ ವೇಳೆ ಸುಮಾರು ೪೨ ಲಕ್ಷ ರೂಪಾಯಿಗಳ ನಗದು ಹಣವನ್ನು ವಶಪಡಿಸಿಕೊಳ್ಳಲಾಗಿದೆ.

ಬೇಲೆಕೇರಿ ಬಂದರಿನ ಮೂಲಕ ಅಕ್ರಮ ಕಬ್ಬಿಣದ ಅದಿರು ರಫ್ತಿನಲ್ಲಿ ಎಂಎಸ್‌ಪಿಎಲ್ ಲಿಮಿಟೆಡ್, ಗ್ರೀನ್‌ಟೆಕ್ಸ್ ಮೈನಿಂಗ್ ಇಂಡಸ್ಟ್ರೀಸ್ ಲಿಮಿಟೆಡ್, ಶ್ರೀನಿವಾಸ ಮಿನರಲ್ಸ್ ಟ್ರೇಡಿಂಗ್ ಕಂಪನಿ, ಅರ್ಷದ್ ಎಕ್ಸ್‌ಪೋರ್ಟ್ಸ್ ಸೇರಿದಂತೆ ಹಲವು ಕಂಪನಿಗಳು ಫಲಾನುಭವಿಗಳಾಗಿವೆ.

**********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಶ್ವೇತಭವನದಲ್ಲಿ ಭೇಟಿಯಾಗಿದ್ದಾರೆ.

ಮಾತುಕತೆ ವೇಳೆ ಭಾರತ ಇನ್ನು ಮುಂದೆ ರಷ್ಯಾದಿಂದ ತೈಲವನ್ನು ಖರೀದಿಸುವುದಿಲ್ಲ ಎಂದು ತಿಳಿಸಿದ್ದಾರೆ ಹಾಗೂ ರಷ್ಯಾ ಅವಲಂಬನೆಯನ್ನು ಭಾರತ ಕಡಿಮೆ ಮಾಡಿದೆ ಎಂದು ಹೇಳಿದ್ದಾರೆ. ಈವರೆಗೆ ಭಾರತ ರಷ್ಯಾದಿಂದ ೩೮ ಪ್ರತಿಶತದಷ್ಟು ತೈಲ ಖರೀದಿಸಿದ್ದು, ಮುಂದಿನ ದಿನಗಳಲ್ಲಿ ಅವಲಂಬನೆ ಕಡಿಮೆ ಮಾಡಲಿದೆ ಎಂದು ಪ್ರತಿಪಾದಿಸಿದ್ದಾರೆ. ಭಾರತ ರಷ್ಯಾದ ತೈಲವನ್ನು ಖರೀದಿಸದಿದ್ದರೆ ರಷ್ಯಾ-ಉಕ್ರೇನ್ ಸಂಘರ್ಷ ಕೊನೆಗೊಳಿಸುವುದು ಸುಲಭ ಎಂದು ತಿಳಿಸಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಉತ್ತಮ ವ್ಯಕ್ತಿ ಎಂದು ಬಣ್ಣಿಸಿದ್ದು, ಭಾರತವನ್ನು ಹಾಡಿ ಹೊಗಳಿದ್ದಾರೆ.

**********

ಮುಂಬರುವ ಚಳಿಗಾಲದಲ್ಲಿ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯ ನಿಯಂತ್ರಿಸಲು ವಾಯು ಗುಣಮಟ್ಟ ನಿರ್ವಹಣಾ ಆಯೋಗ ಪರಿಶೀಲನೆ ನಡೆಸಿದೆ. ಆಯೋಗದ ೨೫ನೇ ಸಭೆಯಲ್ಲಿ ಶ್ರೇಣೀಕೃತ ಪ್ರತಿಕ್ರಿಯೆ ಕ್ರಿಯಾಯೋಜನೆ ಅನುಷ್ಠಾನ ಮತ್ತು ಈ ಪ್ರದೇಶದಲ್ಲಿ ವಾಹನಗಳಿಂದ ಮಾಲಿನ್ಯ ಹೊರಸೂಸುವಿಕೆ, ಕೈಗಾರಿಕಾ ಮಾಲಿನ್ಯ ಹಾಗೂ ತ್ಯಾಜ್ಯ ಸುಡುವ ನಿಯಂತ್ರಣಕ್ಕೆ ಸಂಬಂಧಿಸಿದ ಹಲವು ಶಾಸನಬದ್ಧ ನಿರ್ದೇಶನಗಳನ್ನು ಪರಿಶೀಲಿಸಿತು. ದೆಹಲಿ ಹಾಗೂ ಎನ್‌ಸಿಆರ್‌ನಲ್ಲಿ ನಿಗದಿಪಡಿಸಿದ ಸ್ಥಳಗಳಲ್ಲಿ ಮಾತ್ರ ಹಸಿರು ಪಟಾಕಿಗಳ ಮಾರಾಟಕ್ಕೆ ಮಾತ್ರ ಅನುಮತಿ ನೀಡುವ ಕುರಿತು ಸುಪ್ರೀಂಕೋರ್ಟ್ ಆದೇಶವನ್ನು ಆಯೋಗ ಪರಿಶೀಲನೆ ನಡೆಸಿದೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಜಮ್ಮು-ಕಾಶ್ಮೀರದಲ್ಲಿ ಸಂವಿಧಾನದ ೩೭೦ನೇ ವಿಧಿ ರದ್ದುಗೊಳಿಸಿ, ಕಾಶ್ಮೀರವನ್ನು ದೇಶದ ಮುಖ್ಯ ವಾಹಿನಿಗೆ ಜೋಡಿಸಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಬಿಹಾರದ ಸರನ್‌ನಲ್ಲಿ ಚುನಾವಣಾ ಪ್ರಚಾರ ಸಭೆ ಉದ್ದೇಶಿಸಿ ಅವರು, ಕಳೆದ ೨೦ ವರ್ಷಗಳಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಬಿಹಾರದಲ್ಲಿ ಭ್ರಷ್ಟಾಚಾರ, ಮಾಫಿಯಾ ಮತ್ತು ಇತರೆ ಅಕ್ರಮಗಳಿಗೆ ಕಡಿವಾಣ ಹಾಕಿದ್ದಾರೆ. ಎನ್ ಡಿಎ ಆಡಳಿತಾವಧಿಯಲ್ಲಿ ಅನೇಕ ಕಲ್ಯಾಣ ಯೋಜನೆಗಳು ಜಾರಿಗೊಂಡು ರಾಜ್ಯ ಅಭಿವೃದ್ಧಿಯತ್ತ ಸಾಗುತ್ತಿದೆ ಎಂದರು. ಈ ಬಾರಿ ಎನ್ ಡಿ ಎ ಮೈತ್ರಿಕೂಟ ಹೆಚ್ಚಿನ ಬಹುಮತದೊಂದಿಗೆ ಅಧಿಕಾರ ಹಿಡಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**********

ಪಾಕಿಸ್ತಾನವು ಅಫ್ಘಾನಿಸ್ತಾನದ ಪಕ್ತಿಕಾದ ಗಡಿ ಪ್ರಾಂತ್ಯದ ಮೇಲೆ ಕಳೆದ ರಾತ್ರಿ ವಾಯುದಾಳಿ ನಡೆಸಿದ್ದು, ಹತ್ತು ನಾಗರಿಕರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಹಲವಾರು ಮಂದಿ ಗಾಯಗೊಂಡಿದ್ದಾರೆ. ಈ ಮೂಲಕ ಗಡಿಯಲ್ಲಿ ಪಾಕಿಸ್ತಾನ ೪೮ ಗಂಟೆಗಳ ಕದನ ವಿರಾಮ ಉಲ್ಲಂಘಿಸಿದೆ. ಹಿರಿಯ ತಾಲಿಬಾನ್ ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿ, ಪಾಕಿಸ್ತಾನವು ಕದನ ವಿರಾಮವನ್ನು ಉಲ್ಲಂಘಿಸಿ ಪಕ್ತಿಕಾ ಪ್ರಾಂತ್ಯದ ಮೂರು ಸ್ಥಳಗಳ ಮೇಲೆ ಬಾಂಬ್ ದಾಳಿ ನಡೆಸಿದೆ ಎಂದು ತಿಳಿಸಿದ್ದಾರೆ.

**********

ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಡೆನ್ಮಾರ್ಕ್ ಓಪನ್ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಕಳೆದ ರಾತ್ರಿ ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಶ್ರೇಯಾಂಕರಹಿತ ಇಂಡೋನೇಷ್ಯಾದ ಜೋಡಿ ಮೊಹಮ್ಮದ್ ರಿಯಾನ್ ಆರ್ಡಿಯಾರ್ಟೋ ಮತ್ತು ರೆಹಮತ್ ಹಿದಾಯತ್ ಅವರನ್ನು ೨೧-೧೫, ೧೮-೨೧, ೨೧-೧೬ ಸೆಟ್‌ಗಳಿಂದ ಸೋಲಿಸಿತು. ಈ ಜೋಡಿ ಇಂದು ನಡೆಯುವ ಸೆಮಿಫೈನಲ್ ಪಂದ್ಯದಲ್ಲಿ ಜಪಾನ್‌ನ ಟುಕುರೊ ಹೊಕಿ ಮತ್ತು ಯುಗೊ ಕೊಬಯಾಶಿ ಅವರನ್ನು ಎದುರಿಸಲಿದೆ. ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಲಕ್ಷ್ಯಸೇನ್ ಸೋಲು ಅನುಭವಿಸಿ ಪಂದ್ಯಾವಳಿಯಿಂದ ನಿರ್ಗಮಿಸಿದ್ದಾರೆ.

**********

ಭಾರತ - ಆಸ್ಟ್ರೇಲಿಯಾ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿ ನಾಳೆಯಿಂದ ಆರಂಭವಾಗಲಿದೆ. ಈ ಪಂದ್ಯದಲ್ಲಿ ಭಾರತದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಆಡಲಿದ್ದಾರೆ. ಈಗಾಗಲೇ ಉಭಯ ಆಟಗಾರರು ಟಿ-೨೦ ಪಂದ್ಯಗಳಿಂದ ನಿವೃತ್ತಿ ಹೊಂದಿದ್ದಾರೆ. ಈ ಸರಣಿಯಲ್ಲಿ ಮೂರು ಪಂದ್ಯಗಳು ನಡೆಯಲಿವೆ. ಈ ಸರಣಿ ಮೂಲಕ ಶುಭ್‌ಮನ್ ಗಿಲ್ ಮೊದಲ ಬಾರಿಗೆ ಮೊದಲ ಬಾರಿಗೆ ಏಕದಿನ ಪಂದ್ಯವನ್ನು ಮುನ್ನಡೆಸಲಿದ್ದಾರೆ.

******END****